# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ

E-mail : kannadapostnews@gmail.com / ಕನ್ನಡ post

Price: ₹1

Vol.No.01 | Issue. 303 | Pages. 2 | Date: 26-10-2025, SUNDAY

RNI NO: KARKAN/2024/89601

Kannada Daily

ಸಂಪುಟ : 01 – ಸಂಚಿಕೆ : 303 – ಪುಟಗಳು : 2 26-10-2025 ಭಾನುವಾರ

Ph: 8762954248

ದರ : ₹1


# ಬಸವ ರಾಜೇಂದ್ರ ಶ್ರೀ ಹೆಸರಿನಲ್ಲಿ ಆರೋಗ್ಯ ಸೇವೆ

## ಪುಷ್ಪಗಿರಿ ಆರೋಗ್ಯ ವಿಜ್ಞಾನ ಸಂಸ್ಥೆಗಳ ಉದ್ಘಾಟನೆ | ಕಹಿ ಘಟನೆ ಮೆಲುಕು ಹಾಕಿದ ಸ್ವಾಮೀಜಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶ್ರೀ ಬಸವ ರಾಜೇಂದ್ರ ಸ್ವಾಮೀಜಿ ಅನಾರೋಗ್ಯಕ್ಕೆ ತುತ್ತಾದಾಗ ಅಂಬುಲೆನ್ಸ್‌ನಲ್ಲಿ ಬೆಂಗಳೂರಿನ ಆಸ್ಪತ್ರೆಗೆ ಕರೆದೊಯ್ಯಲು ಹಣವಿಲ್ಲದೆ ಪರದಾಡಿದ್ದೆವು. ಈಗ ಅವರ ಹೆಸರಿನಲ್ಲೇ ಆರೋಗ್ಯ ಸಂಸ್ಥೆ ಸ್ಥಾಪಿಸುತ್ತಿರುವುದು ಹೆಮ್ಮೆ ತರಿಸಿದೆ ಎಂದು ಪುಷ್ಪಗಿರಿ ಮಹಾಸಂಸ್ಥಾನ ಮಠದ ಶ್ರೀ ಸೋಮಶೇಖರ ಸ್ವಾಮೀಜಿ ಹೇಳಿದರು.

ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಶನಿವಾರ ಏರ್ಪಡಿಸಿದ್ದ ಶ್ರೀ ಪುಷ್ಪಗಿರಿ ಆರೋಗ್ಯ ವಿಜ್ಞಾನ ಸಂಸ್ಥೆಗಳ ಹಾಗೂ ಶ್ರೀ ಪುಷ್ಪಗಿರಿ ಇನ್ವಿನೆಕ್ಸಾ ಸಾಫ್ಟವೇರ್ ಕಂಪನಿ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿ, ಶ್ರೀಗಳನ್ನು ಬೆಂಗಳೂರಿನ ಆಸ್ಪತ್ರೆಗೆ ಕರೆದೊಯ್ಯಲು ಆಗಲಿಲ್ಲ. ನಂತರ ಅವರ ಆರಾಧನೆಗೂ ದುಡ್ಡಿಲ್ಲದೆ ಪರದಾಡುವಂತಾಯಿತು. ಅವರಿವರ ಬಳಿ ಹಣ ಸಂಗ್ರಹಿಸಿ ಕಾರ್ಯಕ್ರಮ ಮಾಡಿದ್ದೇವೆ. ಆದರೆ ಇಂದು ಆರೋಗ್ಯ ಸಂಸ್ಥೆಯನ್ನೇ



ಕಟ್ಟುತ್ತಿರುವುದು ಹೆಮ್ಮೆಯ ವಿಷಯ ಎಂದರು. ಪುಷ್ಪಗಿರಿ ಮಹಾಸಂಸ್ಥಾನ ಮಠದ ಒಂದೊಂದೆ ಹೆಜ್ಜೆ ಇಡುತ್ತಾ ಬೆಳೆಯುತ್ತಿದೆ. ಕಳೆದ 10 ವರ್ಷದಲ್ಲಿ 15 ವಿದ್ಯಾ ಸಂಸ್ಥೆಗಳನ್ನು ಕಟ್ಟಿದೆ. ಇದು ನನ್ನೊಬ್ಬನಿಂದ ಆಗಿರುವ ಸಾಧನೆಯಲ್ಲ. ಪ್ರತಿ ಸರ್ಕಾರದ ಸಚಿವರು, ಶಾಸಕರ, ಅಧಿಕಾರಿಗಳು ಸಾಧನೆಗೆ ಸಹಕಾರ ನೀಡಿದ್ದಾರೆ ಎಂದರು.

ಎನಗಿಂತ ಕಿರಿಯರಿಲ್ಲ ಶಿವ ಭಕ್ತರಿಗಿಂತ ಹಿರಿಯರಿಲ್ಲ ಎಂಬ ಬಸವಣ್ಣ ಅವರ ನುಡಿಯಂತೆ ಕೆಲಸ ಮಾಡುತ್ತಿದ್ದೇನೆ.

> ಬಡವರಿಗೆ ಸೇವೆ ಒದಗಿಸಲು ಆಸ್ಪತ್ರೆ ತೆರೆಯುವ ಮೂಲಕ ತಮ್ಮ ವ್ಯಾಪ್ತಿಯಲ್ಲಿ ಸಾಮಾಜಿಕ ಕೊಡುಗೆ ನೀಡುತ್ತಿರುವ ಪುಷ್ಪಗಿರಿ ಮಠದ ಕಾರ್ಯ ಶ್ಲಾಘನೀಯ. ಶ್ರೀ ಮಠದ ಸಾಮಾಜಿಕ ಚಟುವಟಿಕೆಗೆ ನಮ್ಮ ಬೆಂಬಲ ಸದಾ ಇರುತ್ತದೆ. ಸಮಾಜದ ಉದ್ಧಾರಕ್ಕಾಗಿ ಮಠವು ಹೆಮ್ಮೆಯ ಕೆಲಸ ಮಾಡುತ್ತಿದೆ. ನಾನು ಕೂಡ ಮಠದ ಭಕ್ತನಾಗಿದ್ದು ಪೂಜೆ ಧಾರ್ಮಿಕತೆ ಜೊತೆ ಜೊತೆಗೆ ಮಹಿಳೆಯರ ಸಬಲೀಕರಣ, ಆರೋಗ್ಯ ಶಿಕ್ಷಣ, ವೈದ್ಯಕೀಯ, ತಾಂತ್ರಿಕ ಕ್ಷೇತ್ರದಲ್ಲಿ ಮಠದ ವತಿಯಿಂದ ಅನೇಕ ಕೆಲಸಗಳು ನಡೆಯುತ್ತಿರುವುದು ಶ್ಲಾಘನೀಯ.
>
> **– ಶ್ರೇಯಸ್ ಪಟೇಲ್, ಸಂಸದ**

### 100 ಹಾಸಿಗೆ ಆಸ್ಪತ್ರೆಗೆ ಸಹಕರಿಸಿ

ಶಾಸಕ ಹೆಚ್.ಕೆ. ಸುರೇಶ್ ಮಾತನಾಡಿ, ಸಮಾಜಕ್ಕೆ ಆಹಾರ, ಶಿಕ್ಷಣ, ಆರೋಗ್ಯ ಮನುಷ್ಯನಿಗೆ ಮುಖ್ಯ. ಈ ಮೂರು ಕ್ಷೇತ್ರಗಳಲ್ಲಿ ಸೋಮಶೇಖರ ಸ್ವಾಮೀಜಿ ಗುರುತರ ಸಾಧನೆ ಮಾಡಿದ್ದಾರೆ.

ಮಠದ ಜವಾಬ್ದಾರಿ ವಹಿಸಿಕೊಂಡ ದಿನದಿಂದಲೂ ಏಳಿಗೆಗಾಗಿ ಕೆಲಸ ಮಾಡುತ್ತಿದ್ದಾರೆ.

ಮಠ ಮಾನ್ಯ ಮಾತ್ರವಲ್ಲದೆ ಕೃಷಿ, ಶಿಕ್ಷಣದ ಮೂಲಕ ಗಮನ ಸೆಳೆದಿದ್ದಾರೆ. ಈಗ ಆರೋಗ್ಯ ಕ್ಷೇತ್ರಕ್ಕೆ ಕಾಲಿಟ್ಟಿದ್ದು ಹೆಮ್ಮೆ ತರಿಸಿದೆ. ಎಸ್.ಎಂ. ಕೃಷ್ಣ ನಗರದಲ್ಲಿ 100 ಬೆಡ್ ಸಾಮರ್ಥ್ಯದ ಆಸ್ಪತ್ರೆಯನ್ನು ನಿರ್ಮಿಸಲು ಯೋಜನೆ ರೂಪಿಸಲಾಗಿದೆ. ಹುಡಾ ಅಧ್ಯಕ್ಷ ಪಟೇಲ್ ಶಿವಪ್ಪನವರು ಈ ಕುರಿತು ಮುಖ್ಯಮಂತ್ರಿ ಜೊತೆ ಚರ್ಚಿಸಿ ಸರ್ಕಾರಕ್ಕೆ ಕಟ್ಟುವ ಹಣದಲ್ಲಿ ರಿಯಾಯಿತಿ ಕೊಡಿಸಬೇಕು. ಈ ವಿಚಾರದಲ್ಲಿ ನಾನೂ ನಿಮ್ಮ ಜೊತೆಗಿರುತ್ತೇನೆಂದರು.

ನಾವು ಭಿಕ್ಷುಕರು ಇದ್ದ ಹಾಗೆ. ಕುಳಿತಲ್ಲೇ ತಥಾಸ್ತು ಅಂದರೆ ಏನೂ ಆಗುವುದಿಲ್ಲ. ಎಲ್ಲರೂ ಕೈ ಜೋಡಿಸಿದಾಗ ಇಂತಹ ಕೆಲಸಗಳು ಆಗುತ್ತವೆ ಎಂದು ತಿಳಿಸಿದರು.

ಸುತ್ತೂರು, ಆದಿಚುಂಚನಗಿರಿ, ಸಿದ್ದಗಂಗಾ ಸಂಸ್ಥೆಗಳು ಲಕ್ಷಾಂತರ ಭಕ್ತರಿಗೆ ದಾರಿಯಾಗಿದೆ. ದೊಡ್ಡ ದೊಡ್ಡ ಸಂಸ್ಥೆಗಳು ಗುರುತಿಸಿಕೊಂಡಿವೆ. ಸದ್ಯ ಏಳು ಕೋರ್ಸ್ ಪ್ರಾರಂಭವಾಗಿದೆ. ಸರ್ಕಾರದಿಂದ ನರ್ಸಿಂಗ್ ಕಾಲೇಜಿಗೆ ಅನುಮತಿ ಸಿಕ್ಕರೆ ಮುಂದಿನ ವರ್ಷದಿಂದ ಅದನ್ನೂ ಪ್ರಾರಂಭಿಸುತ್ತೇವೆಂದರು.

ಕಾರ್ಯಕ್ರಮ ಉದ್ಘಾಟಿಸಿದ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಮಾತನಾಡಿ, ಮಠಗಳು ಅನ್ನ ದಾಸೋಹದ ಜೊತೆಗೆ ವಿದ್ಯಾ ದಾಸೋಹವನ್ನು ಮಾಡುತ್ತಿವೆ. ಆ ಮೂಲಕ ರಾಜ್ಯದ ಪ್ರಗತಿಗೆ ತಮ್ಮದೇಯಾದ ಕೊಡುಗೆ ನೀಡುತ್ತಿವೆ ಎಂದು ಹೇಳಿದರು.

ಆಧ್ಯಾತ್ಮ ಕ್ಷೇತ್ರ ಮಾತ್ರವಲ್ಲದೆ ಸಮಾಜಮುಖಿ ಕೆಲಸ ಮಾಡುತ್ತಾ ಜನರ ನಡುವೆ ಅನ್ಯೋನ್ಯತೆಯಿಂದ ಸಾಗುತ್ತಾ ಬಸವಾದಿ ಶರಣರ ನಿಜವಾದ ತತ್ವವನ್ನು ಸಾರುತ್ತಿವೆ.

ಪುಷ್ಪಗಿರಿ ಮಠದ ಸೋಮಶೇಖರ ಸ್ವಾಮೀಜಿ ಅವರು ಉತ್ತಮ ಕೆಲಸ ಮಾಡುತ್ತಿದ್ದು ಎಲ್ಲರ ಸಹಕಾರದೊಂದಿಗೆ ಕ್ಷೇತ್ರದ ಬೆಳವಣಿಗೆ ಹಾಗೂ ಸಮಾಜದ ಉದ್ಧಾರಕ್ಕಾಗಿ ಪ್ರಯತ್ನ ಮಾಡುತ್ತಿದ್ದಾರೆ. ಹಾಸನ ಉತ್ತಮ ಜಿಲ್ಲೆಯಾಗಿದ್ದು ಅಧಿಕಾರಿಗಳು ಜನಪ್ರತಿನಿಧಿಗಳು ಜನರ ಸೇವೆ ಮಾಡುವ ಉತ್ತಮ ಗುಣ ಹೊಂದಿದ್ದಾರೆ.

ಅಲ್ಲದೆ ಮಠಗಳು ಸಹ ಜನರನ್ನು ಸನ್ಮಾರ್ಗದಲ್ಲಿ ಸಾಗುವಂತೆ ಪ್ರೇರಣೆ ಕೆಲಸ ಮಾಡುತ್ತಿದೆ. ಎಲ್ಲರನ್ನೂ ಪ್ರೀತಿಸುವ ಸನ್ಮಾರ್ಗದಲ್ಲಿ ಕೊಂಡೊಯ್ಯುವ ಮೂಲಕ ಉತ್ತಮ ಸಮಾಜ ನಿರ್ಮಾಣ ಸಾಧ್ಯವಾಗಲಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾಧಿಕಾರ ಅಧ್ಯಕ್ಷ ಗುರುಪ್ರಸಾದ್ ಮಾತನಾಡಿದರು. ಮಹಾನಗರ ಪಾಲಿಕೆ ಮೇಯರ್ ಗಿರೀಶ್ ಚನ್ನವೀರಪ್ಪ, ಹುಡಾ ಅಧ್ಯಕ್ಷ ಪಟೇಲ್ ಶಿವಪ್ಪ, ಉದ್ಯಮಿ ಗ್ರಾನೈಟ್ ರಾಜಶೇಖರ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್, ಶ್ರೀನಿವಾಸ್, ಜಿ.ಕುಮಾರಸ್ವಾಮಿ, ಅಶೋಕ್, ಕಟ್ಟಾಯ ಶಿವಕುಮಾರ್, ಮಮತಾ ಪಾಟೀಲ್ ಇತರರಿದ್ದರು.

## ವಿದ್ಯಾರ್ಥಿಗಳಿಗೆ ಇತಿಹಾಸ, ಸಾಂಸ್ಕೃತಿಕ ಪ್ರಜ್ಞೆ ಮೂಡಿಸುವ ಕೆಲಸವಾಗಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಇತಿಹಾಸವನ್ನು ಮಕ್ಕಳಿಗೆ ತಿಳಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಇತಿಹಾಸದ ಅರಿವು, ಶಿಲಾ ಶಾಸನಗಳು ಹಾಗೂ ಸಾಂಸ್ಕೃತಿಕ ಮತ್ತು ಧಾರ್ಮಿಕ ಪ್ರಜ್ಞೆಯನ್ನು ವಿದ್ಯಾರ್ಥಿಗಳಲ್ಲಿ ಮೂಡಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಪ್ರಾಂಶುಪಾಲ ಡಾ. ಎಸ್.ದಿನೇಶ್ ಹೇಳಿದರು.

ತಾಲ್ಲೂಕಿನ ಶ್ರವಣಬೆಳಗೊಳದ ಎಸ್.ಎನ್. ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಶನಿವಾರ ಆಯೋಜಿಸಿದ್ದ ಚಂದ್ರಗಿರಿ ಚಿಕ್ಕಬೆಟ್ಟ ದರ್ಶನ ಕಾರ್ಯಕ್ರಮದಲ್ಲಿ ಮಾತನಾಡಿ, ವಿದ್ಯಾರ್ಥಿಗಳಿಗೆ ಸಾವಿರಾರು ವರ್ಷಗಳ ಪ್ರಾಚೀನತೆ ಹೊಂದಿರುವ ಇತಿಹಾಸವನ್ನು ತಿಳಿಸುವುದು ಬಹಳ ಮುಖ್ಯ. ಶ್ರವಣಬೆಳಗೊಳದ ಸಾಂಸ್ಕೃತಿಕ, ಧಾರ್ಮಿಕ, ಐತಿಹಾಸಿಕವಾದ ಮೌಲಿಕ ವಿಚಾರಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಬೇಕಾಗಿದೆ ಎಂದರು.

ಚಂದ್ರಗಿರಿ ಚಿಕ್ಕಬೆಟ್ಟವು ಧಾರ್ಮಿಕವಾಗಿ ಹಾಗೂ ಸಾಂಸ್ಕೃತಿಕವಾಗಿ



ಮಹತ್ವ ಹೊಂದಿದ ಸ್ಥಳ. ಕ್ರಿಸ್ತ ಪೂರ್ವದಲ್ಲಿ ಆಚಾರ್ಯ ಭದ್ರಬಾಹು ಮುನಿಗಳು ಸಹಸ್ರಾರು ತ್ಯಾಗಿಗಳೊಂದಿಗೆ ಶ್ರವಣಬೆಳಗೊಳಕ್ಕೆ ಬಂದ ಉಲ್ಲೇಖವಿದೆ. ಶ್ರವಣಬೆಳಗೊಳದಲ್ಲಿ ಒಟ್ಟು 572 ಶಿಲಾ ಶಾಸನಗಳು ಇದ್ದು, ಅವುಗಳಲ್ಲಿ 271 ಶಿಲಾ ಶಾಸನಗಳು ಚಂದ್ರಗಿರಿ ಬೆಟ್ಟದಲ್ಲೇ ಇವೆ. ಪ್ರಪಂಚದಲ್ಲಿ ಅತಿ ಹೆಚ್ಚು ಶಿಲಾಶಾಸನಗಳು ಒಂದೇ ಕಡೆ ದೊರೆತಿರುವುದು ಶ್ರವಣಬೆಳಗೊಳದಲ್ಲಿ ಎಂಬುದು ಹೆಮ್ಮೆಯ ಸಂಗತಿ ಎಂದರು.

ಕನ್ನಡ ಲಿಪಿಯ ಉಗಮ, ವಿಕಾಸವನ್ನು ಅರಿಯಲು ಇಲ್ಲಿನ ಶಾಸನಗಳ ಅಧ್ಯಯನ ಬಹಳ ಮಹತ್ವ ಪಡೆದಿದೆ. ಕ್ರಿ.ಶ. 6ನೇ ಶತಮಾನದಿಂದ 19ನೇ ಶತಮಾನದ ಅವಧಿಯಲ್ಲಿ ರಚಿಸಲಾದ ಶಿಲಾ ಶಾಸನಗಳು ಸೇರಿದಂತೆ 92 ಸ್ಮಾರಕಗಳಿದ್ದು, 14 ಬಸದಿ, 7 ನಿಷಧಿ ಮಂಟಪ ಹಾಗೂ 2 ಮಾನಸ್ತಂಬಗಳು ಇಲ್ಲಿ ಲಭ್ಯವಿದೆ. ರನ್ನ ಕವಿ, ಚಾವುಂಡರಾಯ ಹಾಗೂ ಕೃಷ್ಣರಾಜೇಂದ್ರ ಒಡೆಯರ್ ಅವರ ಹಸ್ತಾಕ್ಷರವನ್ನು ಚಂದ್ರಗಿರಿ ಚಿಕ್ಕಬಿಟ್ಟದಲ್ಲಿ ಕಾಣಬಹುದು. ಇಲ್ಲಿ 61 ಜನ ತ್ಯಾಗಿಗಳು ಸಲ್ಲೇಖನ ವ್ರತ ಕೈಗೊಂಡು ಸಮಾಧಿಮರಣ ಹೊಂದಿರುವ ದಾಖಲೆಗಳಿವೆ.

ಬಸದಿಗಳ ವಾಸ್ತುಶಿಲ್ಪ, ತೀರ್ಥಂಕರರ ಮೂರ್ತಿಗಳ ಶಿಲ್ಪಕಲೆ ಗಮನ ಸೆಳೆಯುತ್ತವೆ. ಗಂಗರು, ರಾಷ್ಟ್ರಕೂಟರು, ಚಾಲುಕ್ಯರು, ಹೊಯ್ಸಳರು, ವಿಜಯನಗರ ಹಾಗೂ ಮೈಸೂರಿನ ಅರಸರ ಕಾಲದ ಬಸದಿಗಳು ಇಲ್ಲಿದ್ದು, ಹಲವಾರು ಧಾರ್ಮಿಕ ಹಾಗೂ ಸಾಂಸ್ಕೃತಿಕವಾದ ಮೌಲ್ವಿಕ ವಿಚಾರಗಳು ಚಂದ್ರಗಿರಿ ಚಿಕ್ಕಬೆಟ್ಟದಲ್ಲಿ ಅಡಗಿವೆ ಎಂದು ತಿಳಿಸಿದರು.

2012 ರಲ್ಲಿ ಶ್ರವಣಬೆಳಗೊಳ ಜೈನಮಠದ ಹಿಂದಿನ ಪೀಠಾಧ್ಯಕ್ಷರಾಗಿದ್ದ ಕರ್ಮಯೋಗಿ ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟಾರಕ ಮಹಾ ಸ್ವಾಮೀಜಿಯವರ ನೇತೃತ್ವದಲ್ಲಿ ಚಂದ್ರಗಿರಿ ಮಹೋತ್ಸವ ನಡೆದಾಗಿನಿಂದ ಈ ಕಾರ್ಯಕ್ರಮವನ್ನು ನಡೆಸಿಕೊಂಡು ಬರುತ್ತಿದ್ದು, ಪ್ರಸ್ತುತ ಕ್ಷೇತ್ರದ ಪೀಠಾಧ್ಯಕ್ಷ ಸ್ವಸ್ತಿಶ್ರೀ ಚಾರುಕೀರ್ತಿ ಪಂಡಿತಾಚಾರ್ಯವರ್ಯ ಭಟ್ಟಾರಕ ಸ್ವಾಮಿಗಳವರ ಮಾರ್ಗದರ್ಶನದಲ್ಲಿ ಮುಂದುವರಿಸುತ್ತಿದ್ದೇವೆ ಎಂದರು.

ಉಪನ್ಯಾಸಕರಾದ ವೀಣಾ, ದೀಪಾ, ನವೀನ್‌ಕುಮಾರ್, ಶಂಕರ್ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕರ್ತವ್ಯ ಲೋಪ ಎಸಗುವ ವೈದ್ಯರ ವಿರುದ್ಧ ಕ್ರಮ ಜರುಗಿಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವೈದ್ಯರು ಕರ್ತವ್ಯ ಲೋಪ ಎಸಗಿದ್ದು ಸಾಬೀತಾದರೆ ಮುಲಾಜಿಲ್ಲದೆ ಕ್ರಮ ಜರುಗಿಸಬೇಕೆಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಅವರು ಹಿಮ್ಸ್ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಸಂಸ್ಥೆಗೆ ಸಂಬಂಧಿಸಿದ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿ, ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ವೈದ್ಯರು ಕರ್ತವ್ಯ ಪ್ರಜ್ಞೆ ಮರೆತು ಅನಾಗರಿಕರಂತೆ ವರ್ತಿಸುವ ಆರೋಪಗಳು ಕೇಳಿಬರುತ್ತವೆ. ಅದಕ್ಕೆ ಯಾವ ಕಾರಣಕ್ಕೂ ಅವಕಾಶ ಮಾಡಿಕೊಡಬಾರದು ಎಂದರು.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಿ ಸಾರ್ವಜನಿಕರ ಬಳಕೆಗೆ ಒದಗಿಸಬೇಕು. ಕಾಮಗಾರಿ



ಪೂರ್ಣಗೊಂಡಿರುವ ಕಟ್ಟಡಗಳನ್ನು ಬಳಕೆ ಮಾಡಿಕೊಳ್ಳಬೇಕು. ಬ್ಯಾಕ್ ಲಾಗ್ ಹಾಗೂ 371 ಜೆ ಅಡಿ ಖಾಲಿ ಇರುವ ಹುದ್ದೆಗಳನ್ನು ಅನುಮೋದನೆ ಪಡೆದು ಭರ್ತಿಗೆ ಕ್ರಮವಹಿಸಲು ಸೂಚಿಸಿದರು.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಅವಶ್ಯವಿರುವ ಹುದ್ದೆಗಳ ಭರ್ತಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು ಎಂದು ನಿರ್ದೇಶನ ನೀಡಿದರು.

ಬಳಕೆಗೆ ಬಾರದ ಅಂಬುಲೆನ್ಸ್ ನಿಷ್ಕ್ರಿಯಗೊಳಿಸಿ ಸಿಎಸ್‌ಆರ್ ಅಡಿಯಲ್ಲಿ ಅಗತ್ಯವಿರುವ ಅಂಬುಲೆನ್ಸ್ ಪಡೆದುಕೊಳ್ಳಬೇಕು. ಖಾಲಿ ಇರುವ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವಂತೆ ನಿರ್ದೇಶನ ನೀಡಿದರು.

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಎಬಿಆರ್‌ಕೆ ಯೋಜನೆಯಡಿ ಸೌಲಭ್ಯ ಪಡೆಯಲು ರೋಗಿಗಳ ಆಧಾರ್ ಕಾರ್ಡ್‌ನೊಂದಿಗೆ ಲಿಂಕ್ ಆಗಿರುವ ಮೊಬೈಲ್ ಸಂಖ್ಯೆ ಇರುವುದಿಲ್ಲ. ಓಟಿಪಿ ಪಡೆಯಬೇಕಿರುತ್ತದೆ. ಇದರಿಂದ ತೊಂದರೆಯಾಗುತ್ತಿದೆ. ಈ ಸಮಸ್ಯೆಯನ್ನು ಬಗೆಹರಿಸುವಂತೆ ಮನವಿ ಮಾಡಿದರು.

ಬೋಧನಾ ವಿಭಾಗಕ್ಕೆ 98 ಹೆಚ್ಚುವರಿ ಹುದ್ದೆ ನೇಮಕಾತಿ ಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಹಾಗೂ ಸಿಎಸ್ ಆರ್ ಅನುದಾನಡಿ ಸಿಟಿ ಸ್ಕ್ಯಾನಿಂಗ್ ನೀಡಲಾಗಿದೆ ಎಂದು ನಿರ್ದೇಶಕರು ಮಾಹಿತಿ ನೀಡಿದರು.

ಹುಡಾ ಅಧ್ಯಕ್ಷ ಪಟೇಲ್ ಶಿವಪ್ಪ, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಹಿಮ್ಸ್ ನಿರ್ದೇಶಕ ಡಾ. ರಾಜಣ್ಣ, ಹಿಮ್ಸ್ ಆಡಳಿತ ಪರಿಷತ್ ಸದಸ್ಯ ರವೀಶ್, ವೈದ್ಯಕೀಯ ಅಧಿಕ್ಷಕ ಡಾ. ರಾಘವೇಂದ್ರ ಪ್ರಸಾದ್, ಹಿಮ್ಸ್ ಪ್ರಾಂಶುಪಾಲ ಡಾ. ಬಿ.ಸಿ. ರವಿಕುಮಾರ್, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ನಾಗಪ್ಪ, ಮುಖ್ಯ ಆಡಳಿತಾಧಿಕಾರಿ ರೇಖಾ ಇತರರಿದ್ದರು.

ನಂತರ ಸಚಿವರು ನೂತನವಾಗಿ ನಿರ್ಮಾಣಗೊಂಡು ಉದ್ಘಾಟನೆಗೆ ಸಿದ್ಧವಾಗಿರುವ ಗ್ರಂಥಾಲಯ ಕಟ್ಟಡಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ನಗರದ ಡೈರಿ ವೃತ್ತದಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರಕ್ಕೆ ಭೇಟಿ ಪರಿಶೀಲಿಸಿದರು.

## ಎಸ್‌ಬಿಎಂ ಉದ್ಯಾನವನದಲ್ಲಿ ಗಿಡ ನೆಡುವ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಬಿ.ಕಾಟೀಹಳ್ಳಿ ಎಸ್‌ಬಿಎಂ ಉದ್ಯಾನವನದಲ್ಲಿ ಶನಿವಾರ ಹಾಸನಾಂಬ ಲಯನ್ಸ್ ಕ್ಲಬ್ ವತಿಯಿಂದ ಗಿಡ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಎಸ್‌ಬಿಎಂ ಬಡಾವಣೆ ಅಧ್ಯಕ್ಷ ರಂಗೇಗೌಡ ಮಾತನಾಡಿ, ಎಸ್‌ಬಿಎಂ ಬಡಾವಣೆ ಅನೇಕ ಸಮಸ್ಯೆಗಳಿಂದ ಬಳಲುತ್ತಿದೆ. ಮುಂದಿನ ದಿನಗಳಲ್ಲಿ ಶಾಸಕ ಹೆಚ್.ಪಿ.ಸ್ವರೂಪ್ ಅವರನ್ನು ಖುದ್ದು ಭೇಟಿಯಾಗಿ ಸಮಸ್ಯೆ ಗಮನಕ್ಕೆ



ತರಲಾಯಿತು.

ಮಹಾನಗರ ಪಾಲಿಕೆ ಅಧಿಕಾರಿ ಹಾಗೂ ಜನಪ್ರತಿನಿಧಿಗಳನ್ನು ಭೇಟಿ ಮಾಡಲಾಗಿದೆ. ಹಂತ ಹಂತವಾಗಿ ಮೂಲಸೌಕರ್ಯ ಕಲ್ಪಿಸಲು ಕ್ರಮ ವಹಿಸಲಾಗುವುದೆಂದರು.

ಲಯನ್ಸ್ ಕ್ಲಬ್ ಮುಖ್ಯಸ್ಥ ಉಡುಪಿ ಅರವಿಂದ್ ಅವರ ನೇತೃತ್ವದಲ್ಲಿ 70ಕ್ಕೂ ಹೆಚ್ಚು ಗಿಡ ನೆಡಲಾಯಿತು. ಹಾಸನಾಂಬ ಲಯನ್ಸ್ ಕ್ಲಬ್ ಅಧ್ಯಕ್ಷ ಮೋಹನ್ ಕುಮಾರ್, ಕಾರ್ಯದರ್ಶಿ ಮಂಜುನಾಥ್, ಖಜಾಂಚಿ ಹರೀಶ್, ಎಸ್‌ಬಿಎಂ ಬಡಾವಣೆ ಅಧ್ಯಕ್ಷ ರಂಗೇಗೌಡ, ಕಾರ್ಯದರ್ಶಿ ಶಿವೇಗೌಡ, ಉಪಾಧ್ಯಕ್ಷ ಸುರೇಶ್, ರಾಮಸ್ವಾಮಿ, ರಂಗಸ್ವಾಮಿ, ಸತೀಶ್ ಇತರರಿದ್ದರು.

## ಪುರಸಭಾ ಮುಖ್ಯಾಧಿಕಾರಿ ಕಚೇರಿಗೆ ಬೆಂಕಿ ಹಚ್ಚಿದ್ದ ವ್ಯಕ್ತಿ ಬಂಧನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಪಟ್ಟಣದ ಪುರಸಭಾ ಮುಖ್ಯಾಧಿಕಾರಿ ಕಚೇರಿಗೆ ಬೆಂಕಿ ಇಟ್ಟಿದ್ದ ವ್ಯಕ್ತಿಯನ್ನು ನಗರ ಠಾಣೆ ಪೊಲೀಸರು ಶನಿವಾರ ಬಂಧಿಸಿದ್ದಾರೆ. ಪಟ್ಟಣದ ಕುಶಾಲನಗರ ಬಡಾವಣೆಯ ನಿಂಗರಾಜು ಪುರಸಭೆ ಕಚೇರಿಗೆ ನುಗ್ಗಿ ಅಲ್ಲಿನ ದಾಖಲಾತಿಗಳಿಗೆ ಬೆಂಕಿ ಹಚ್ಚಿ. ನಿಂಗನಿಂಗರಾಜುನನ್ನು ಸಕಲೇಶಪುರ ನಗರ ಪೊಲೀಸ್ ಇನ್ಸ್ ಪೆಕ್ಟರ್ ವಿ.ಸಿ.ವನರಾಜು ನೇತೃತ್ವದ ತಂಡ ಬಂಧಿಸಿದೆ.

## ಹಾಡಹಗಲೇ ಚಿನ್ನಾಭರಣ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಹಿಂಬಾಗಿಲಿನಿಂದ ಹಾಡಹಗಲೇ ಮನೆಗೆ ನುಗ್ಗಿರುವ ಕಳ್ಳರು 1.48 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ತಾಲ್ಲೂಕಿನ ಗುಡ್ಡೇನಹಳ್ಳಿ ಗ್ರಾಮದಲ್ಲಿ ನಡೆದಿದೆ. ಶಿವಕುಮಾರ್ ಅವರು ಅ. 14ರ ಬೆಳಿಗ್ಗೆ 11.30ಕ್ಕೆ ಮನೆಗೆ ಬೀಗ ಹಾಕಿ ಹೆಂಡತಿ ಭಾಗ್ಯಮ್ಮ ಅವರೊಂದಿಗೆ ಜಮೀನು ಕೆಲಸಕ್ಕೆ ಹೋಗಿದ್ದರು. ಸಂಜೆ 7 ಗಂಟೆಗೆ ಮನೆಗೆ ಬಂದಾಗ ಹಿಂದಿನ ಬಾಗಿಲು ತೆರೆದಿರುವುದು ತಿಳಿದಿದೆ. ಬೀರುವಿನಲ್ಲಿಟ್ಟಿದ್ದ 20 ಗ್ರಾಂ ತೂಕದ ಚಿನ್ನದ ಸರ, 15 ಗ್ರಾಂ ತೂಕದ ಒಂದು ಜೊತೆ ಕಿವಿಯೊಲೆ ಮತ್ತು ಜುಮುಕಿ ಕಳುವು ಮಾಡಿದ್ದಾರೆ. ಹಳ್ಳಿಮೈಸೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## 1.92 ಲಕ್ಷ ರೂ. ಬೆಲೆಯ ಚಿನ್ನಾಭರಣ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮನೆಯಲ್ಲಿ ಯಾರೂ ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ಬೀಗ ಮುರಿದು ಒಳನುಗ್ಗಿರುವ ಕಳ್ಳರು 1.92 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ಎಂ.ಹೊಸಕೊಪ್ಪಲು ಬಡಾವಣೆಯಲ್ಲಿ ನಡೆದಿದೆ.

ಬಿ.ಎನ್.ರಾಣಿ ಎಂಬುವವರ ಮನೆಯಲ್ಲಿ ಕಳ್ಳತನ ನಡೆದಿದೆ. ರಾಣಿ ಅವರು ಅ. 23 ರಂದು ತಾಯಿ ಪುಷ್ಪ ಅವರೊಂದಿಗೆ ಬಾಗೂರು ಹೋಬಳಿ ಭಕ್ತರಹಳ್ಳಿಗೆ ತೆರಳಿದ್ದರು. ಮಾರನೇ ದಿನ ಮನೆಗೆ ಬಂದಾಗ ಬಾಗಿಲು ಮುರಿದಿರುವುದು ಗೊತ್ತಾಗಿದೆ. ಬಲವಾದ ಆಯುಧದಿಂದ ವಾಡ್‌ರೂಬ್ ಲಾಕರ್ ಮುರಿದಿರುವ ಕಳ್ಳರು 12 ಗ್ರಾಂ ತೂಕದ 3 ಜೊತೆ ಚಿನ್ನದ ಓಲೆ, 3 ಗ್ರಾಂ ತೂಕದ ಚಿನ್ನದ ತಾಳಿ, 4 ಗ್ರಾಂ ತೂಕದ ಒಂದು ಚಿನ್ನದ ಓಲೆ, 1 ಗ್ರಾಂ ತೂಕದ ಒಂದು ಚಿನ್ನದ ಮೂಗುತಿ, 250 ಗ್ರಾಂ ತೂಕದ ಒಂದು ಬೆಳ್ಳಿ ಚೊಂಬು, 150 ಗ್ರಾಂ ತೂಕದ ಒಂದು ಬೆಳ್ಳಿಯ ಲಕ್ಷ್ಮೀ ಮುಖವಾಡ, 100 ಗ್ರಾಂ ತೂಕದ ಬೆಳ್ಳಿ ತಟ್ಟೆ ಕಳವು ಮಾಡಿದ್ದಾರೆ. ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಆರೋಗ್ಯ ಕಾಳಜಿ ಮುಖ್ಯ : ಶಾಸಕ ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಪ್ರತಿಯೊಬ್ಬರಿಗೂ ಆರೋಗ್ಯ ಬಹಳ ಮುಖ್ಯವಾಗಿದ್ದು, ಆರೋಗ್ಯ ಇಲ್ಲದಿದ್ದರೆ ಎಲ್ಲವೂ ಶೂನ್ಯವಾಗುತ್ತದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಶನಿವಾರ ಪಟ್ಟಣದ ಲಯನ್ಸ್ ಸಭಾಂಗಣದಲ್ಲಿ ಲಯನ್ಸ್ ಇಂಟರ್ ನ್ಯಾಷನಲ್‌ನ ಲಯನ್ಸ್ ಕ್ಲಬ್ ಹಾಗೂ ಲಿಯೊ ಕ್ಲಬ್, ಕೆ.ಎಂ.ಸಿ. ಆಸ್ಪತ್ರೆ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮತ್ತು ಸಂಸ್ಕೃತಿ ಕಾರ್ಡಿಯಾಕ್ ಕೇಂದ್ರದಿಂದ ಹಮ್ಮಿಕೊಂಡಿದ್ದ ಆರೋಗ್ಯ ಉಚಿತ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿ, ನಾವು ಆರೋಗ್ಯ ಲೆಕ್ಕಿಸದೆ ದುಡಿಯುತ್ತೇವೆ.ಆದರೆ ಆರೋಗ್ಯ ಕೈಕೊಟ್ಟಾಗ ದುಡಿದ ಹಣ ಆಸ್ಪತ್ರೆಗೆ ಸುರಿಯುತ್ತೇವೆ. ಅಧಿಕ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಹೃದಯಾಘಾತದಂತಹ ರೋಗಗಳು ಹೆಚ್ಚುತ್ತಿವೆ. ಆರೋಗ್ಯದತ್ತ ಪ್ರತಿಯೊಬ್ಬರೂ ಕಾಳಜಿ ವಹಿಸಬೇಕು ಎಂದರು.

ಲಯನ್ಸ್ ಸಂಸ್ಥೆ ಅಧ್ಯಕ್ಷ ಗಿರೀಶ್ ಮಾತನಾಡಿ,ಲಯನ್ಸ್ ಸಂಸ್ಥೆ ಸಾಮಾಜಿಕ ಸೇವೆ ಮತ್ತು ಮಾನವೀಯ ಕಾರ್ಯಗಳಿಗೆ ಬದ್ಧವಾಗಿದೆ. ಸಂಸ್ಥೆಯ ಮೂಲ ಧ್ಯೇಯವೇ ಸೇವೆಯಾಗಿದ್ದು ಅದನ್ನು ನಿರಂತರವಾಗಿ ಮಾಡುತ್ತಿದ್ದೇವೆ ಎಂದರು.

ಸಂಸ್ಥೆಯು ಹಲವು ಸಮಾಜಮುಖಿ



ಕಾರ್ಯಗಳನ್ನು ನಿರಂತರವಾಗಿ ಕೈಗೊಂಡಿದ್ದು, ಈ ಆರೋಗ್ಯ ಶಿಬಿರವೂ ಅದರಲ್ಲಿ ಒಂದು ಮಹತ್ವದ ಹಂತವಾಗಿದೆ. ಕ್ಯಾನ್ಸರ್ ಸೇರಿ ಹಲವು ಗಂಭೀರ ಕಾಯಿಲೆಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಇದು ಸಹಾಯ ಮಾಡಲಿದೆ. ವೈದ್ಯರಾದ ನವೀನ್ ಚಂದ್ರಶೆಟ್ಟಿ, ಸುಧಾಕರ್ ಹಾಗೂ ಅವರ ತಂಡದ ಸಲಹೆಯಿಂದ ಈ ಶಿಬಿರ ಹಮ್ಮಿಕೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಸೇವಾ ಕಾರ್ಯಗಳನ್ನು ಕೈಗೊಳ್ಳುವ ಉದ್ದೇಶವಿದೆ ಎಂದು ಹೇಳಿದರು.

ಶಿಬಿರದಲ್ಲಿ ಸಾಮಾನ್ಯ ಆರೋಗ್ಯ ತಪಾಸಣೆ, ಮೂಳೆ ತಪಾಸಣೆ, ಸ್ನಾಯು-ಸಂಧಿ ತಪಾಸಣೆ, ರಕ್ತದೊತ್ತಡ ಪರೀಕ್ಷೆ, ಮಧುಮೇಹ ತಪಾಸಣೆ, ನರ ಮತ್ತು ಹೃದಯ ಸಂಬಂಧಿತ ತಪಾಸಣೆ ಸೇರಿ ವಿವಿಧ ಸೇವೆಗಳು ಸ್ಥಳೀಯ ಜನತೆಗೆ ಉಚಿತವಾಗಿ ಲಭ್ಯವಾಗುವಂತೆ ವ್ಯವಸ್ಥೆ ಮಾಡಲಾಗಿತ್ತು.

ಶಿಬಿರದಲ್ಲಿ ಸ್ನಾಯು ನೋವು, ರಕ್ತದೊತ್ತಡ, ಹೃದಯ ಸಮಸ್ಯೆ ಹಾಗೂ ಮಧುಮೇಹ ಮುಂತಾದ ಕಾಯಿಲೆಗಳ ಕುರಿತು ತಪಾಸಣೆ ಮತ್ತು ಮಾರ್ಗದರ್ಶನ ನೀಡಲಾಯಿತು.

ಶಿಬಿರದಲ್ಲಿ ಭಾಗವಹಿಸಿದ ತಜ್ಞ ವೈದ್ಯರಲ್ಲಿ ಡಾ. ಭೂಷಣ್ ಶೆಟ್ಟಿ (ಕಿಡ್ನಿ ಮತ್ತು ಮೂತ್ರರೋಗ ತಜ್ಞ), ಡಾ. ವೈಶಾಕ್ ಭಟ್ (ಬೆನ್ನುಮೂಳೆ ಮತ್ತು ಎಲುಬು ತಜ್ಞ), ಡಾ. ಅಭಿಷೇಕ್ ಕೃಷ್ಣ (ಕ್ಯಾನ್ಸರ್ ತಜ್ಞ) ಹಾಗೂ ಡಾ. ಮಧುಕರ್ (ಹೃದಯ ರೋಗ ತಜ್ಞ),ಲಯನ್ಸ್ ಸಂಸ್ಥೆಯ ವಿಶ್ವನಾಥ್, ಜೈ ಶಂಕರ್, ಪ್ರಭಾಕರನ್, ಮೀನಾಕ್ಷಿ, ಖಾದರ್ ಇತರರಿದ್ದರು.

# ಹಾಸನಾಂಬ ಟೂರ್ ಪ್ಯಾಕೇಜ್‌ಗೆ ಅಭೂತಪೂರ್ವ ಬೆಂಬಲ

## ಬೆಂಗಳೂರು-ಮೈಸೂರಿನ 1,185 ಭಕ್ತರಿಂದ ದರ್ಶನ | ಸ್ಥಳೀಯ ಪ್ರವಾಸಕ್ಕೆ ನಿರಾಸಕ್ತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನಾಂಬ ಹಾಗು ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಅಂಗವಾಗಿ ಪ್ರವಾಸೋದ್ಯಮ ಇಲಾಖೆ ಹಾಗೂ ಕೆಎಸ್‌ಆರ್‌ಟಿಸಿಯಿಂದ ಕೈಗೊಂಡಿದ್ದ ಪ್ರವಾಸಿ ಪ್ಯಾಕೇಜ್‌ಗೆ ಅಭೂತಪೂರ್ವ ಬೆಂಬಲ ವ್ಯಕ್ತವಾಗಿದೆ.

ಆದರೆ ಜಿಲ್ಲೆಯ ಸ್ಥಳೀಯ ಪ್ರವಾಸಿ ತಾಣಗಳ ಪರಿಚಯ ದೃಷ್ಟಿಯಿಂದ ಕೈಗೊಂಡಿದ್ದ ಹಾಸನ ಟೂರ್ ಪ್ಯಾಕೇಜ್‌ಗೆ ಸಾರ್ವಜನಿಕರಿಂದ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬೆಂಗಳೂರು, ಮೈಸೂರಿನಿಂದ ಹಾಸನಾಂಬ ದರ್ಶನಕ್ಕೆ ಭಕ್ತರನ್ನು ಕರೆತರುವಲ್ಲಿ ಪ್ರವಾಸೋದ್ಯಮ ಇಲಾಖೆ ಯಶಸ್ವಿಯಾಗಿದೆ. ಆಗಸದಿಂದ ಹಾಸನ ತೋರಿಸುವ ಹೆಲಿ ಟೂರಿಸಂಗೆ ಜನರು ಹೆಚ್ಚಿನ ಸಂಖ್ಯೆಯಲ್ಲಿ ಬಂದಿದ್ದಾರೆ. ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ಸಂಸ್ಥೆಯು ಬೆಂಗಳೂರು ಹಾಗೂ ಮೈಸೂರಿನಿಂದ ವಿಶೇಷ ಬಸ್‌ಗಳ ವ್ಯವಸ್ಥೆ ಮಾಡಿತ್ತು. ಅ. 10 ರಿಂದ 22ರ ವರೆಗೆ ಬಸ್‌ಗಳು ಸಂಚರಿಸಿವೆ. ಬೆಂಗಳೂರಿನಿಂದ 34 ಬಸ್‌ನಲ್ಲಿ ಒಟ್ಟು 1,113 ಜನರು ಬಂದಿದ್ದಾರೆ. ಅದೇ ರೀತಿ ಮೈಸೂರಿನಿಂದ 3 ಬಸ್‌ಗಳಲ್ಲಿ 72 ಜನರು ಬಂದಿದ್ದಾರೆ. ಒಟ್ಟು 37 ಬಸ್‌ನಿಂದ 1,185 ಭಕ್ತರು ಹಾಸನಾಂಬ ದರ್ಶನ ಪಡೆದಿದ್ದಾರೆ. ವಿಶೇಷ ಪ್ಯಾಕೇಜ್‌ನಲ್ಲಿ ಬಂದ ಭಕ್ತರಿಗೆ ಸಾವಿರ ರೂ. ಟಿಕೆಟ್ ಸಹ ನೀಡಲಾಗಿತ್ತು. ಮೈಸೂರಿನಿಂದ ಬರುವವರಿಗೆ 2150 ರೂ. ಮತ್ತು ಬೆಂಗಳೂರಿನ ಭಕ್ತರಿಗೆ 2016 ರೂ. ನಿಗದಿ ಮಾಡಲಾಗಿತ್ತು. ಹಾಸನಾಂಬ ದರ್ಶನ ಬಳಿಕ ಭಕ್ತರು ದೇವಿಗೆರೆ, ಕೆ.ಹೊಸಕೋಟೆಯಲ್ಲಿರುವ ಕಂಚಾಂಬ ದೇವಸ್ಥಾನ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಹೊರ ಜಿಲ್ಲೆಯ ಭಕ್ತರಿಗೆ ಪ್ರವಾಸೋದ್ಯಮ ಇಲಾಖೆ ಕೈಗೊಂಡಿರುವ ಯೋಜನೆ ಯಶಸ್ವಿಯಾಗಿದೆ.




> ಸಾವಿರ ರೂ. ಟಿಕೆಟ್‌ನೊಂದಿಗೆ ಹಾಸನಾಂಬ ಹಾಗು ಸಪ್ತಮಾತೃಕೆಯರ ದರ್ಶನ ಮಾಡಿಸಿದ್ದರಿಂದ ಬೆಂಗಳೂರು, ಮೈಸೂರಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಬಂದರು. ಆದರೆ ಸ್ಥಳೀಯ ಪ್ರವಾಸಿ ಪ್ಯಾಕೇಜ್‌ಗೆ ಸಾರ್ವಜನಿಕರು ಆಸಕ್ತಿ ತೋರಲಿಲ್ಲ.
> 
> **- ಅರುಣ್‌ಕುಮಾರ್ ಸಂಗಾವಿ, ಪ್ರವಾಸೋದ್ಯಮ ಇಲಾಖೆ ಪ್ರಭಾರ ಉಪನಿರ್ದೇಶಕ**

### ಸ್ಥಳೀಯ ಪ್ರವಾಸಕ್ಕೆ ಸಿಗದ ಸ್ಪಂದನೆ

ಪ್ರತಿವರ್ಷದಂತೆ ಈ ಬಾರಿಯೂ ಹಾಸನಾಂಬ ಜಾತ್ರಾ ಮಹೋತ್ಸವ ಅಂಗವಾಗಿ ಜಿಲ್ಲೆಯ ವಿವಿಧ ಪ್ರವಾಸಿ ತಾಣಗಳ ಪರಿಚಯಿಸಲು ಟೂರ್ ಪ್ಯಾಕೇಜ್ ಕೈಗೊಳ್ಳಲಾಗಿತ್ತಾದರೂ ಸಾರ್ವಜನಿಕರಿಂದ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಹತ್ತು ದಿನಗಳ ಪ್ರವಾಸಿ ಪ್ಯಾಕೇಜ್ ಅಡಿಯಲ್ಲಿ 34 ಬಸ್‌ಗಳು ಸಂಚರಿಸಿ 1240 ಜನರಷ್ಟೇ ಪ್ರವಾಸ ಮಾಡಿದ್ದಾರೆ. ಒಟ್ಟು ಎಂಟು ಪ್ಯಾಕೇಜ್‌ಗಳಲ್ಲಿ ಜಿಲ್ಲೆಯ ವಿವಿಧ ಐತಿಹಾಸಿಕ ಪ್ರವಾಸಿ ತಾಣಗಳ ಪರಿಚಯಿಸುವ ಉದ್ದೇಶ ಹೊಂದಲಾಗಿತ್ತು. ನಿತ್ಯ ಬೆಳಗ್ಗೆ ನಗರ ಸಾರಿಗೆ ಬಸ್‌ನಿಂದ ಹೊರಡುತ್ತಿದ್ದ ಬಸ್‌ಗಳು ನಿಗದಿತ ತಾಣಗಳ ವೀಕ್ಷಣೆ ಬಳಿಕ ಸಂಜೆ 5 ಗಂಟೆಗೆ ಪುನಃ ನಗರಕ್ಕೆ ಬರುತ್ತಿದ್ದವು. ಜಿಲ್ಲೆಯ ಜನರು ನೋಡಿರುವ ಸ್ಥಳಗಳೇ ಆದ್ದರಿಂದ ಅದಕ್ಕೆ ಆಸಕ್ತಿ ತೋರಲಿಲ್ಲ ಎನ್ನಲಾಗಿದೆ.

### ಆಗಸದಿಂದ ಹಾಸನ ನೋಡಿದ 908 ಜನರು

ನಗರದ ಹೊಸ ಬಸ್ ನಿಲ್ದಾಣದ ಚನ್ನಪಟ್ಟಣ ಕೆರೆ ಅಂಗಳದಲ್ಲಿ ಏರ್ಪಡಿಸಿದ್ದ ಹೆಲಿ ಟೂರಿಸಂಗೆ ಉತ್ತಮ ಪ್ರತಿಕ್ರಿಯೆ ಸಿಕ್ಕಿದೆ. ಎಂಟು ನಿಮಿಷದ ಅವಧಿಯಲ್ಲಿ ಆಗಸದಲ್ಲಿ ಹಾಸನ ನೋಡುವ ಸದಾವಕಾಶ ಇದಾಗಿತ್ತು. ಒಟ್ಟು 72 ಟ್ರಿಪ್ ಹೆಲಿಕಾಪ್ಟರ್ ಸಂಚರಿಸಿದ್ದು 908 ಜನರು ಪ್ರಯಾಣಿಸಿದ್ದಾರೆ. ತಲಾ 4200 ರೂ. ದರ ನಿಗದಿ ಮಾಡಲಾಗಿತ್ತು.

# ಕೆಆರ್‌ಎಸ್ ಪಕ್ಷದಿಂದ ಕೊಣನೂರಿನಲ್ಲಿ ಆಂದೋಲನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಕೊಣನೂರು: ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದಿಂದ ಶುಕ್ರವಾರ ಪಟ್ಟಣದಲ್ಲಿ ಎದ್ದೇಳು ಕನ್ನಡಿಗ ಕೆಆರ್‌ಎಸ್ ಪಕ್ಷ ಸೇರು ಬಾ ಎಂಬ ಆಂದೋಲನ ಹಮ್ಮಿಕೊಳ್ಳಲಾಗಿತ್ತು. ಕೆಆರ್‌ಎಸ್ ಜಿಲ್ಲಾಧ್ಯಕ್ಷ ಉಮೇಶ್ ಬೆಳಗುಂಬ ಮಾತನಾಡಿ, ಭ್ರಷ್ಟಾಚಾರ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಪಣ ತೊಡಬೇಕು. ಪ್ರಸ್ತುತ ದಿನಗಳಲ್ಲಿ ರಾಜಕಾರಣಿಗಳೆಂದರೆ ಲಂಚ ಎಂಬ ಪದ ಸಾಮಾನ್ಯವಾಗಿದೆ. ಆದರೆ ರವಿಕೃಷ್ಣಾ ರೆಡ್ಡಿ ಅವರು ಹಲವು ವರ್ಷಗಳಿಂದ ಭ್ರಷ್ಟಾಚಾರದ ವಿರುದ್ಧ ಹೋರಾಟ ನಡೆಸುತ್ತಾ ಜನರಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆ. ವಿದ್ಯಾವಂತ ಯುವಕರು ಕೆಆರ್‌ಎಸ್ ಸೇರುವ ಮೂಲಕ ಬೆಂಬಲ ನೀಡಬೇಕೆಂದು ಕೋರಿದರು. ನಮ್ಮ ಪಕ್ಷ ರೈತರು, ಬಡವರು, ದೀನ ದಲಿತರ ಪರವಾಗಿದ್ದು ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಪಕ್ಷದ ಕುರಿತು ಒಲವು ಹೆಚ್ಚುತ್ತಿದೆ. 2028ರ ಚುನಾವಣೆಯಲ್ಲಿ ಕೆಆರ್‌ಎಸ್ ಪ್ರಮುಖ ಪಕ್ಷವಾಗಿ ಹೊರ ಹೊಮ್ಮಲಿದೆಯೆಂದರು.



ಪಕ್ಷದ ತಾಲ್ಲೂಕಾಧ್ಯಕ್ಷ ದೇವರಾಜ್ ಅವರು ಮಾತನಾಡಿ, ಕೆಆರ್‌ಎಸ್ ಪಕ್ಷವು ಭ್ರಷ್ಟರನ್ನು ಮಟ್ಟ ಹಾಕಲು ಮತ್ತು ಸಾಮಾನ್ಯಜನರಿಗೆ ನ್ಯಾಯ ಕೊಡಿಸಲು ಪಣ ತೊಟ್ಟಿದೆಯೆಂದರು. ಆಂದೋಲನದ ಅಂಗವಾಗಿ ಸಾರ್ವಜನಿಕರಿಗೆ ಕರಪತ್ರ ವಿತರಿಸಲಾಯಿತು. ತಾಲ್ಲೂಕು ಘಟಕದ ಪದಾಧಿಕಾರಿಗಳು ಹಾಜರಿದ್ದರು.

# ಮೌಲ್ಯಯುತ ಶಿಕ್ಷಣದ ಜೊತೆಗೆ ವಿವೇಕವೂ ಮುಖ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮೌಲ್ಯಯುತ ಶಿಕ್ಷಣದ ಜೊತೆಗೆ ವಿವೇಕ ಅಳವಡಿಸಿಕೊಂಡು ಸಮಾಜದಲ್ಲಿ ಉತ್ತಮ ಬದುಕು ಕಟ್ಟಿಕೊಳ್ಳಬೇಕು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಹಿರೀಸಾವೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ 2025-26ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾ, ರಾಷ್ಟ್ರೀಯ ಸೇವಾ ಯೋಜನೆ, ರೆಡ್ ಕ್ರಾಸ್, ರೆಡ್ ರಿಬ್ಬನ್ ಹಾಗೂ ಇತರೆ ಕಾರ್ಯಕ್ರಮಗಳಿಗೆ ಚಾಲನೆ ನೀಡಿ, ಶಿಕ್ಷಣವು ಬದುಕಿನ ಮೆಟ್ಟಿಲು ಎಂದರು.

ತಾಲೂಕಿನಲ್ಲಿ ಸರ್ಕಾರಿ ಹಿರಿಯ, ಕಿರಿಯ, ಪ್ರೌಢಶಾಲೆ ಹಾಗೂ ಕಾಲೇಜುಗಳ ಶೈಕ್ಷಣಿಕ ವ್ಯವಸ್ಥೆಯ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಹಿರೀಸಾವೆ ಪ್ರಥಮ ದರ್ಜೆ ಕಾಲೇಜಿನ ಹೆಚ್ಚಿನ ಅಭಿವೃದ್ಧಿಗೆ 1 ಕೋಟಿ ರೂ.




ಅನುದಾನ ಕಲ್ಪಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದ್ದು ಮತ್ತಷ್ಟು ಅಭಿವೃದ್ಧಿಗೊಳಿಸಲಾಗುವುದು ಎಂದು ಭರವಸೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಡ್ರಗ್ಸ್ ಮಾಫಿಯಾ ತಲೆದೋರುತ್ತಿದ್ದು ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿದೆ. ವಿದ್ಯಾರ್ಥಿಗಳು ಪುಸ್ತಕಗಳನ್ನು ಸ್ನೇಹಿತರನ್ನಾಗಿ ಹಾಗೂ ವಿದ್ಯೆಯನ್ನು ದೀಕ್ಷೆಯಾಗಿ ಸ್ವೀಕರಿಸಿ ತಮ್ಮ ಬದುಕನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನಾಲಿಗೆಗೆ ಹೆಚ್ಚು ರುಚಿ ನೀಡುವ ಆಹಾರವು ಆರೋಗ್ಯಕ್ಕೆ ಅಷ್ಟೇ ಹಾನಿಕಾರಕವಾಗಿರುತ್ತದೆ. ಹಣ, ಆಸ್ತಿ ಸಂಪಾದನೆಗಿಂತ ಆರೋಗ್ಯ ಉಳಿಸಿಕೊಳ್ಳುವುದು ಅತಿ ಮುಖ್ಯವಾದ ಸಂಗತಿಯಾಗಿದೆ. ಪೌಷ್ಟಿಕ ಆಹಾರ ಸೇವನೆಯ ಜೊತೆಗೆ ಯೋಗ ಹಾಗೂ ಧ್ಯಾನವನ್ನು ದೈನಂದಿನ ಬದುಕಿನಲ್ಲಿ ದಿನಚರಿಯಾಗಿ ರೂಢಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಬ್ಯಾಂಕಿಂಗ್ ವ್ಯವಹಾರದಲ್ಲಿ ಗೌಪ್ಯತೆ ಇರಲಿ. ಇತ್ತೀಚಿನ ದಿನಗಳಲ್ಲಿ ಬ್ಯಾಂಕ್ ಖಾತೆಗಳನ್ನು ಅಪರಿಚಿತರು ಹ್ಯಾಕ್ ಮಾಡಿ ಹಣ ದೋಚುವ ದಂಧೆ ಮಾಡಿಕೊಂಡಿದ್ದಾರೆ. ಅದರಿಂದ ನಾಡಿನ ಜನತೆಯ 235 ಕೋಟಿ ರೂ. ಲೂಟಿಯಾಗಿದೆ. ಗ್ರಾಮೀಣ ಭಾಗದ ಜನತೆ ಕಷ್ಟಪಟ್ಟು ಕೂಡಿಟ್ಟ ಹಣ ಖದೀಮರ ಪಾಲಾಗುತ್ತಿದೆ. ಬ್ಯಾಂಕ್ ವ್ಯವಹಾರದ ಬಗ್ಗೆ ಜ್ಞಾನ ಬೆಳೆಸಿಕೊಳ್ಳುವುದು ಅಗತ್ಯ ಎಂದು ತಿಳಿಸಿದರು.

ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್‌ನ ಆಡಳಿತಾಧಿಕಾರಿ ಡಾ. ಎ.ಟಿ.ಶಿವರಾಮು ಮಾತನಾಡಿ, ನಮ್ಮಲ್ಲಿರುವ ಜ್ಞಾನವನ್ನು ಉತ್ತಮ ಕಾರ್ಯಗಳಿಗೆ ಸರಿಯಾಗಿ ಬಳಸಿಕೊಳ್ಳುವ ಮೂಲಕ ಸಮಾಜದ ಏಳಿಗೆಗೆ ಪೂರಕವಾಗಿ ಬದುಕುವುದು ಅಗತ್ಯ. ವಿಷಯ ಯಾವುದೇ ಆಗಲಿ ಅದನ್ನು ಅರಿಯುವ ಜ್ಞಾನ ಬೇಕು ಎಂದರು.

ಶೈಕ್ಷಣಿಕ ವ್ಯವಸ್ಥೆ ಅಭಿವೃದ್ಧಿಗೊಂಡರೆ ಸಾಲದು ಮಕ್ಕಳಲ್ಲಿ ಅಪಾರಜ್ಞಾನ ಬೆಳೆಯಬೇಕು. ಶಿಕ್ಷಣ ಹೆಚ್ಚಿದಂತೆಲ್ಲ ಪಾಲಕರು ಮಕ್ಕಳನ್ನು ಪ್ರಶ್ನಿಸಲು ಭಯಪಡುವ ಅಥವಾ ಹಿಂಜರಿಯುವ ಸ್ಥಿತಿ ನಿರ್ಮಾಣವಾಗಿದೆ. ಮೌಲ್ಯಯುತ ಶಿಕ್ಷಣ ಅಗತ್ಯ ಎಂದು ತಿಳಿಸಿದರು.

# ಬಸ್ ಸಮಸ್ಯೆಗೆ ಬೇಸತ್ತು ವಿದ್ಯಾರ್ಥಿಗಳ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಕೆಎಸ್‌ಆರ್‌ಟಿಸಿ ಬಸ್ ಸಮಯಕ್ಕೆ ಸರಿಯಾಗಿ ಬಾರದ ಕಾರಣ ಶಾಲಾ, ಕಾಲೇಜಿಗೆ ಹೋಗಲು ತೊಂದರೆಯಾಗುತ್ತಿದೆ ಎಂದು ವಿದ್ಯಾರ್ಥಿಗಳು ಬಸ್ ಸಂಚಾರ ತಡೆದು ಪ್ರತಿಭಟನೆ ನಡೆಸಿದರು.

ಬೇಲೂರಿನಲ್ಲಿ ಬಸ್ ಡಿಪೋ ಇದ್ದರೂ ಸಹ ಸಮಯಕ್ಕೆ ಸರಿಯಾಗಿ ಬಸ್‌ಗಳಿಲ್ಲ. ಇನ್ನು ಪ್ರತಿನಿತ್ಯ ಹಾಸನ ಹಾಗೂ ಚಿಕ್ಕಮಗಳೂರು ಜಿಲ್ಲೆಗಳಿಗೆ ಉನ್ನತ ವ್ಯಾಸಂಗ ಮಾಡಲು ಸುಮಾರು 300ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರಯಾಣಿಸುತ್ತಿದ್ದು, ಬೆಳಗ್ಗಿನ ಸಮಯ 7 ರಿಂದ 8 ಗಂಟೆವರೆಗೆ ಸರಿಯಾದ ಬಸ್ ವ್ಯವಸ್ಥೆ ಇಲ್ಲದೆ ವಿದ್ಯಾರ್ಥಿಗಳು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ಇನ್ನು ವಿಭಾಗೀಯ ಅಧಿಕಾರಿಗಳನ್ನು ವಿಚಾರಿಸಲು ಹೋದರೆ ನಮಗೆ ಬಸ್ ಕೊರತೆ ಇದೆ ನಿಮಗೆ ಬೇಕಾದ ಸಮಯದಲ್ಲಿ ಬಸ್‌ಗಳನ್ನು ನೀಡಲು ಅವಕಾಶ ಇಲ್ಲ ಎಂದು ಉಡಾಫೆಯಿಂದ ವರ್ತಿಸುವುದರ ಜೊತೆಗೆ ಕೆಲ ಬಸ್‌ಗಳಲ್ಲಿ ಬಸ್ ಪಾಸ್ ಇರುವ ವಿದ್ಯಾರ್ಥಿಗಳನ್ನು ಕೆಳಗೆ ಇಳಿಸಿರುವ ಹಲವಾರು ಉದಾಹರಣೆಗಳಿವೆ. ನಮ್ಮ ತೊಂದರೆಗಳನ್ನು ಕೇಳುವವರು ಯಾರು ಇಲ್ಲ. ಇದು ಒಂದು ದಿನದ ಗೋಳಲ್ಲ ಇದು ಪ್ರತಿನಿತ್ಯದ ಗೋಳಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.




### ಶಾಸಕರ ಸ್ಪಂದನೆ-ಬಸ್ ವ್ಯವಸ್ಥೆ

ಬೆಂಗಳೂರಿನಲ್ಲಿದ್ದ ಶಾಸಕ ಹೆಚ್.ಕೆ.ಸುರೇಶ್ ವಿಷಯ ತಿಳಿದು ದೂರವಾಣಿ ಮೂಲಕ ಕೆಎಸ್‌ಆರ್‌ಟಿಸಿ ಅಧಿಕಾರಿಗಳಿಗೆ ತರಾಟೆಗೆ ತೆಗೆದುಕೊಂಡು ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಕೂಡಲೇ ಬಸ್‌ಗಳ ವ್ಯವಸ್ಥೆ ಆಗಬೇಕು. ಪ್ರತಿನಿತ್ಯ ಎರಡು ಜಿಲ್ಲೆಗಳಿಗೆ 7 ರಿಂದ 8 ಗಂಟೆಯವರೆಗೆ ಬಸ್ ವ್ಯವಸ್ಥೆ ಕಲ್ಪಿಸಬೇಕು ಇಲ್ಲದಿದ್ದರೆ ನಿಮ್ಮ ವಿರುದ್ಧ ಸಾರಿಗೆ ಸಚಿವರಿಗೆ ದೂರು ಸಲ್ಲಿಸುವುದಾಗಿ ಎಚ್ಚರಿಕೆ ನೀಡಿದ ಬೆನ್ನಲ್ಲೇ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಎರಡು ಬಸ್‌ಗಳನ್ನು ಕಲ್ಪಿಸಲಾಯಿತು.

ಪರೀಕ್ಷೆ ನಡೆಯುತ್ತಿರುವುದರಿಂದ ಸರಿಯಾದ ಸಮಯಕ್ಕೆ ಬಸ್ ಬಾರದೆ ಇರುವುದರಿಂದ ಹಾಸನ ಮತ್ತು ಚಿಕ್ಕಮಗಳೂರು ತೆರಳುವ ವಿದ್ಯಾರ್ಥಿಗಳಿಗೆ ಮುಂದಿನ ಭವಿಷ್ಯ ಏನು.

ಮೂರ್ನಾಲ್ಕು ಬಾರಿ ಡಿಪೊಗೆ ಹೋಗಿ ಅರ್ಜಿ ಸಲ್ಲಿಸಿ ಮನವಿ ಮಾಡಿದರು ಅಧಿಕಾರಿಗಳು ತಲೆಕೆಡಿಸಿಕೊಳ್ಳುತ್ತಿಲ್ಲ ಎಂದು ಕೆಎಸ್ ಆರ್‌ಟಿಸಿ ಅಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗಿದರು.

ಇಷ್ಟೆಲ್ಲಾ ತೊಂದರೆಯಾದರು ಕೆಎಸ್ ಆರ್ ಟಿಸಿ ಡಿಪೊ ಮ್ಯಾನೇಜರ್ ಆಗಲಿ ಅಥವಾ ಟಿ.ಸಿ.ಯಾಗಲಿ ವಿದ್ಯಾರ್ಥಿಗಳ ಗೋಳನ್ನು ಆಲಿಸಲು ಬರದ ಹಿನ್ನಲೆ ಸಾರ್ವಜನಿಕರು ಸಹ ಕೈ ಜೋಡಿಸಿ ಪ್ರತಿಭಟನೆ ನಡೆಸಿದರು.

# ಮಹಿಳಾ ಆಯೋಗ ಅಧ್ಯಕ್ಷರ ಪ್ರವಾಸ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀಚೌಧರಿ ಅವರು ನ. 3 ರಿಂದ 5ರ ವರೆಗೆ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ನ. 3ರ ಮಧ್ಯಾಹ್ನ 12.30ಕ್ಕೆ ಹಾಸನಾಂಬ ಕಲಾಕ್ಷೇತ್ರದಲ್ಲಿ ಆಯೋಜಿಸಿರುವ ಪಿಯು ಹಾಗೂ ಪದವಿ ವಿದ್ಯಾರ್ಥಿನಿಯರೊಂದಿಗೆ ಸಂವಾದ ಕಾರ್ಯಕ್ರಮ ಉದ್ಘಾಟಿಸುವರು. ಸಂಜೆ 4 ಗಂಟೆಗೆ ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡಲಿದ್ದಾರೆ. ಸಂಜೆ 5 ಗಂಟೆಗೆ ಹಾಸನದ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಪೋಸ್ಟ್ ಮೆಟ್ರಿಕ್ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಲಿದ್ದಾರೆ.

ನ. 4 ರಂದು ಬೆ. 9 ಗಂಟೆಗೆ ಹಾಸನದ ಜಿಲ್ಲಾಸ್ಪತ್ರೆ ಮತ್ತು ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಭೇಟಿ ನೀಡಲಿದ್ದಾರೆ. ನಂತರ ಬೆಳಿಗ್ಗೆ 11 ಗಂಟೆಗೆ ಹಾಸನಾಂಬ ಕಲಾಕ್ಷೇತ್ರದಲ್ಲಿ ಆಯೋಜಿಸಿರುವ ಅರಿವು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ನಂತರ ಅರಕಲಗೂಡು ತಾಲ್ಲೂಕು ಸಾರ್ವಜನಿಕ ಆಸತ್ರೆಗೆ ಭೇಟಿ ನೀಡಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಅರಕಲಗೂಡು ಪೊಲೀಸ್ ಠಾಣೆಗೆ ಭೇಟಿ ನೀಡುವರು. ಸಂಜೆ 5 ಗಂಟೆಗೆ ಸಮಾಜ ಕಲ್ಯಾಣ ಇಲಾಖೆಯ ಪೋಸ್ಟ್ ಮೆಟ್ರಿಕ್ ವಸತಿ ನಿಲಯಕ್ಕೆ ಭೇಟಿ ನೀಡುವರು. ನ. 5 ರಂದು ಬೆಳಿಗ್ಗೆ 11 ಗಂಟೆಗೆ ಮಹಿಳಾ ಸ್ಪಂದನಾ ಕಾರ್ಯಕ್ರಮ ಪರಿಶೀಲನಾ ಸಭೆ ನಡೆಸಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸುವರು.

# ಇತಿಹಾಸದಲ್ಲಿ ಈ ದಿನ

## ಅಕ್ಟೋಬರ್-26

1774: ಅಮೆರಿಕಾದ ಫಿಲಡೆಲ್ಫಿಯಾದಲ್ಲಿ ಪ್ರಥಮ ಕಂಟಿನೆಂಟಲ್ ಕಾಂಗ್ರೆಸ್ ಸಭೆ ಮುಗಿಯಿತು.

1825: ವಿಶ್ವದ ಮೊದಲ ಸಾರ್ವಜನಿಕ ರೈಲು ಮಾರ್ಗ ಸ್ಟಾಕ್ಟನ್, ಡಾರ್ಲಿಂಗ್ಟನ್ ರೈಲು ಮಾರ್ಗ ಇಂಗ್ಲೆಂಡಿನಲ್ಲಿ ಆರಂಭವಾಯಿತು.

1947: ಜಮ್ಮು-ಕಾಶ್ಮೀರದ ಮಹಾರಾಜ ಹರಿಸಿಂಗ್ ಭಾರತ ಸೇರ್ಪಡೆ ಪತ್ರಕ್ಕೆ ಸಹಿ ಹಾಕಿದರು. ಇದರಿಂದ ಕಾಶ್ಮೀರ ಭಾರತಕ್ಕೆ ಸೇರ್ಪಡೆಯಾಯಿತು.

1951: ಚರ್ಚಿಲ್ ಮತ್ತೆ ಬ್ರಿಟನ್ನ ಪ್ರಧಾನ ಮಂತ್ರಿಯಾದರು.

1984: ಭಾರತದ ಮೊದಲ ಮಹಿಳಾ ಖಗೋಳ ಶಾಸ್ತ್ರಜ್ಞೆ ಡಾ. ಕಪಿಲ ವಾತ್ಸಾಯನ್ ಅವರಿಗೆ ಪದ್ಮಭೂಷಣ ನೀಡಲಾಯಿತು.

2001: ಅಮೆರಿಕಾದಲ್ಲಿ ಪ್ಯಾಟ್ರಿಯಟ್ ಆಕ್ಟ್ ಕಾನೂನು ಜಾರಿಗೆ ಬಂತು.

### ಜನನ

1863: ಮಹಾರಾಷ್ಟ್ರದ ಪ್ರಸಿದ್ಧ ಸಾಮಾಜಿಕ ಚಿಂತಕ ಶ್ರೀಮಂತ ಬಾಲಗಂಗಾಧರ ತಿಲಕ್ ಅವರ ಶಿಷ್ಯ ವಿಶ್ಣುಶಾಸ್ತ್ರಿ ಚಿಪ್ಲುಂಕರ್

1947: ಭಾರತದ ನಟ ಮತ್ತು ರಾಜಕಾರಣಿ ಹಿತೇಶ್ ಭಾರಧ್ವಾಜ್

1955: ಆಸ್ಟ್ರೇಲಿಯಾದ ಮಾಜಿ ಕ್ರಿಕೆಟಿಗ ಅಲನ್ ಬಾರ್ಡರ್

### ಮರಣ

1952: ಇಟಲಿಯ ಪ್ರಖ್ಯಾತ ನವೋದಯ ಕಲಾವಿದ ಗುಯಿಡೋ ರೆನಿ

2005: ಫ್ರೆಂಚ್ ತತ್ವಜ್ಞ ಜ್ಯಾನ್‌ಬಾಪ್ಟಿಸ್ಟ್ ದೆಲಾಮೋಟ್

# ಹಾಸನಾಂಬ ಪಾಸ್ ಹಂಚಿಕೆ ಮಾಹಿತಿಗೆ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನಾಂಬ ದೇವಿ ಸುಲಭ ದರ್ಶನಕ್ಕಾಗಿ ಜಾರಿಗೆ ತಂದಿದ್ದ ಗೋಲ್ಡ್ ಪಾಸ್‌ಗಳನ್ನು ಜಿಲ್ಲಾಡಳಿತ ಯಾರಿಗೆ ವಿತರಿಸಿದೆಯೆಂಬ ಮಾಹಿತಿ ನೀಡಬೇಕೆಂದು ಆಮ್ ಆದ್ಮಿ ಪಕ್ಷದ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೀಶ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಒಂದು ಪಕ್ಷದ ಏಜೆಂಟರಂತೆ ವರ್ತಿಸಿದ್ದಾರೆ. ಹೆಸರು, ಹಣ ಮಾಡಿಕೊಳ್ಳಲು ರಾಜ್ಯ ಮಟ್ಟದ ಕಾರ್ಯಕ್ರಮ ಮಾಡಿ ಸ್ಥಳೀಯರಿಗೆ ತೊಂದರೆ ಕೊಡುತ್ತಿದ್ದಾರೆ. ಈ ಬಾರಿ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಗಾಗಿ ಮಾಡಿದ ಜಾತ್ರೆಯಂತಿತ್ತು. ಅದ್ದೂರಿ ಜಾತ್ರೆಯಿಂದ ನಮ್ಮೂರಿನ ಜನರಿಗೆ ದೇವಸ್ಥಾನದ ಅಕ್ಕಪಕ್ಕದವರಿಗೆ ಯಾವ ಲಾಭವಾಗಿದೆಯೆಂದು ಪ್ರಶ್ನಿಸಿದರು. ಕಾಂಗ್ರೆಸ್ ಹಾಗು ಬಿಜೆಪಿ ಜಿಲ್ಲಾಧ್ಯಕ್ಷರಿಗೆ ಜಿಲ್ಲಾಡಳಿತದಿಂದ ಸನ್ಮಾನಿಸುವ ಅವಶ್ಯಕತೆಯಿ ಇರಲಿಲ್ಲ. ಜಿಲ್ಲಾಡಳಿತದಿಂದ ಈ ಬಾರಿ ಯಾರಿಗೆ ಎಷ್ಟು ಪಾಸ್ ನೀಡಿದ್ದಾರೆಂಬ ಮಾಹಿತಿ ನೀಡಬೇಕು. ಈ ಸಂಬಂಧ ಮುಖ್ಯಮಂತ್ರಿಗೆ ಪತ್ರ ಬರೆಯುತ್ತೇನೆ ಎಂದರು.




ಹಾಸನಾಂಬ ಮಹೋತ್ಸವ ವಿಚಾರದಲ್ಲಿ ಶಾಸಕ ಹೆಚ್.ಪಿ. ಸ್ವರೂಪ್ ಸಂಪೂರ್ಣ ನಿಷ್ಕ್ರಿಯರಾಗಿದ್ದಾರೆ. ಜಾತ್ರಾ ಮಹೋತ್ಸವದಲ್ಲಿ ಸ್ಥಳೀಯರಿಗೆ ಅನ್ಯಾಯ ಆಗಿದ್ದರೂ ಒಂದು ಮಾತೂ ಆಡಿಲ್ಲ. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಅಗೌರವ ಆದರೂ ತುಟಿ ಬಿಚ್ಚದೆ ಮೌನವಹಿಸಿದ್ದಾರೆಂದರು. ಪಕ್ಷದ ಮುಖಂಡ ಮಂಜೇಗೌಡ ಇದ್ದರು.

# ಬೆಂಬಲ ಯೋಜನೆಯಡಿ ನೋಂದಣಿಗೆ ಅವಕಾಶ: ಜಿಲ್ಲಾಧಿಕಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ರೈತರು ಬೆಳೆದ ಗುಣಮಟ್ಟದ ರಾಗಿ, ಭತ್ತ, ಬಿಳಿ ಜೋಳ ಕಿರು ಸಿರಿ ಧಾನ್ಯ (ನವಣೆ ಮತ್ತು ಸಾಮೆ) ಗಳನ್ನು 2025-26ನೇ ಸಾಲಿನ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ನೇರವಾಗಿ ಖರೀದಿಸಲು ಹಾಸನ ಜಿಲ್ಲೆಗೆ ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತವನ್ನು ಖರೀದಿ ಏಜೆನ್ಸಿಯನ್ನಾಗಿ ನೇಮಿಸಲಾಗಿದೆ. ರೈತರು ನೋಂದಣಿ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದ್ದಾರೆ.

ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅ. 31ರ ವರೆಗೆ ಭತ್ತ, ಡಿ. 15ರ ವರೆಗೆ ರಾಗಿ ಮತ್ತು ಕಿರು ಸಿರಿಧಾನ್ಯ (ನವಣೆ ಮತ್ತು ಸಾಮೆ), ಡಿ. 1 ರಿಂದ 2026ರ ಮಾ.31 ರವರೆಗೆ ಜೋಳ ನೋಂದಣಿಗೆ ಅವಕಾಶವಿರುತ್ತದೆ. ಆಸಕ್ತ ರೈತ ಬಾಂಧವರು ಸದುಪಯೋಗ ಪಡೆದುಕೊಳ್ಳಲು ತಿಳಿಸಿದ್ದಾರೆ.

ನೋಂದಣಿ ಮತ್ತು ಖರೀದಿ ಕೇಂದ್ರಗಳ ವಿವರ: ಆಲೂರು ತಾಲ್ಲೂಕಿನಲ್ಲಿ ರಾಜ್ಯಉಗ್ರಾಮ ನಿಗಮ, ಅರಸೀಕೆರೆ ತಾಲ್ಲೂಕಿನಲ್ಲಿ ಗಂಡಸಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ ), ಜಾವಗಲ್, ಜಾವಗಲ್-2, ಬಾಣಾವರ, ಜೆ.ಸಿ.ಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ ), ಅರಸೀಕೆರೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ).

ಹಾಸನ ತಾಲ್ಲೂಕಿನಲ್ಲಿಹಾಸನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ), ದುದ್ದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ ), ಮೊಸಳೆ ಹೊಸಹಳ್ಳಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ). ಅರಕಲಗೂಡುತಾಲ್ಲೂಕಿನಲ್ಲಿಅರಕಲಗೂಡು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ ), ರಾಮನಾಥಪುರ ರೇಷ್ಮೆ ತರಬೇತಿ ಕೇಂದ್ರ, ಬೇಲೂರು ತಾಲ್ಲೂಕಿನಲ್ಲಿ ಬೇಲೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ ), ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಚನ್ನರಾಯಪಟ್ಟಣ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ), ನುಗ್ಗೇಹಳ್ಳಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ( ಎಪಿಎಂಸಿ ), ಉದಯಪುರರೈತ ಸಂಪರ್ಕಕೇಂದ್ರ, ಶ್ರವಣಬೆಳಗೊಳ

ಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ ), ಬಾಗೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ( ಎಪಿಎಂಸಿ ), ಹಿರಿಸಾವೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ( ಎಪಿಎಂಸಿ ).

ಹೊಳೆನರಸೀಪುರ ತಾಲ್ಲೂಕಿನಲ್ಲಿಹೊಳೆನರಸೀಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ ), ಹಳ್ಳಿಮೈಸೂರು ರೈತ ಸಂಪರ್ಕಕೇಂದ್ರ, ಹಾಗೂಸಕಲೇಶಪುರತಾಲ್ಲೂಕಿನಲ್ಲಿಸಕಲೇಶಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ ), ಈ ಬಾರಿಹೆಚ್ಚುವರಿಯಾಗಿಗಂಡಸಿ, ಜೆ.ಸಿ ಪುರ, ಚನ್ನರಾಯಪಟ್ಟಣದಲ್ಲಿತಲಾ 01



ರಂತೆ, ಅರಸೀಕೆರೆಯಲ್ಲಿ 02, ಒಟ್ಟು 05 ಖರೀದಿ ಕೇಂದ್ರಗಳುಸೇರಿದಂತೆಒಟ್ಟು 27 ಕೇಂದ್ರಗಳನ್ನು ತೆರೆದುಖರೀದಿ ಪ್ರಕ್ರಿಯೆಯನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಉತ್ಪಾದನೆಯಾಗಿ ಮಾರಾಟಕ್ಕೆ ಬರುವ ಕೃಷಿ ಉತ್ಪನ್ನಗಳನ್ನು ಗಮನದಲ್ಲಿಟ್ಟುಕೊಂಡು ಪೂರ್ವಸಿದ್ದತೆ ಮಾಡಿಕೊಳ್ಳಲು ಖರೀದಿ ಏಜೆನ್ಸಿ ಯಾದಕರ್ನಾಟಕಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತಇವರಿಗೆ ಸೂಚಿಸಲಾಯಿತು.

ಖರೀದಿ ಮತ್ತು ಸಂಗ್ರಹಣೆಗೆ ಸಂಬಂಧಿಸಿದಂತೆ ಕಾರ್ಯಯೋಜನೆಯನ್ನುತಯಾರಿಸುವುದು, ಬೆಂಬಲಬೆಲೆ ಯೋಜನೆಯಡಿಯಲ್ಲಿಆಹಾರಧಾನ್ಯಖರೀದಿಸುವ ಬಗ್ಗೆ ಹೆಚ್ಚಿನ ಪ್ರಚಾರ ಮಾಡಬೇಕು, ಪ್ರತಿಖರೀದಿ ಕೇಂದ್ರಗಳಿಗೆ ಗುಣಮಟ್ಟ ಪರಿವೀಕ್ಷಕರು/ಗ್ರೇಡರ್‌ಗಳನ್ನು ನಿಯೋಜಿಸಿಕೊಳ್ಳುವುದು, ರೈತರು ನೊಂದಣಿ/ಖರೀದಿ ಕೇಂದ್ರಕ್ಕೆ ನೀಡುವಮಾದರಿಗಳ ಗುಣಮಟ್ಟ ಪರಿಶೀಲನೆಗೆ ಅಗತ್ಯವಿರುವ ಮ್ಯಾಯಿಶ್ಚರ್ ಮೀಟರ್‌ಗಳನ್ನು ಪ್ರತಿ ನೊಂದಾಣಿಕೇಂದ್ರ/ಖರೀದಿ ಕೇಂದ್ರಗಳಲ್ಲಿ ಕಡ್ಡಾಯವಾಗಿಇಡುವುದು, ಗಾಳಿ/ಮಳೆ/ಬೆಳಕು ಮುಂತಾದ ಪ್ರಕೃತಿಅಥವಾ ಮಾನವ ವಿಕೋಪಗಳಿಂದ ಕೃಷಿ ಉತ್ಪನ್ನರಕ್ಷಿಸಲುಅವಶ್ಯವಿರುವ ಹೊದಿಕೆ, ಹಾಸುಗಳು, ರಕ್ಷಣಾ ಸಾಮಗ್ರಿಗಳನ್ನು ಹಾಗೂ ಖರೀದಿ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸಲು ಅಗತ್ಯ ಮೂಲಭೂತ ಸೌಕರ್ಯಗಳಾದ ಡೇಟಾಎಂಟ್ರಿ ಆಪರೇಟರ್‌ಗಳು, ಕಂಪ್ಯೂಟರ್ ಮತ್ತು ಪ್ರಿಂಟರ್ ವ್ಯವಸ್ಥೆ, ಇಂಟರ್‌ನೆಟ್ ಸೌಲಭ್ಯ, ವಿದ್ಯುತ್ ಸಂಪರ್ಕ ವ್ಯವಸ್ಥೆ ಮುಂತಾದ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳಲು ಸೂಚಿಸಿದರು.

ಸಾಕಾಗುವಷ್ಟುತೂಕದ ಕೇಂದ್ರಗಳನ್ನು ವ್ಯವಸ್ಥೆ ಮಾಡುವುದು, ಕೃಷಿ ಉತ್ಪನ್ನಗಳ ಖರೀದಿ ಮತ್ತು ಸಂಗ್ರಹಣೆಯಲ್ಲಿರೈತ ಬಾಂಧವರಿಗೆಯಾವುದೇ ಕಿರುಕುಳವಾಗದಂತೆ ಮತ್ತು ಆರೋಪಗಳು ಬಾರದಂತೆಕ್ರಮವಹಿಸುವುದು, ರೈತರಿಂದ ಕೃಷಿ ಉತ್ಪನ್ನಗಳನ್ನು ಖರೀದಿಸಿದ ಬಾಬ್ತು ಹಣವನ್ನು 15 ದಿನಗಳೊಗಾಗಿ ಪಾವತಿಸುವುದು, ಖರೀದಿ ಮತ್ತು ಸಂಗ್ರಹಣೆಯಲ್ಲಿ ಮಧ್ಯವರ್ತಿಗಳೊಂದಿಗೆ ಶಾಮೀಲಾಗದಂತೆ ಪೂರ್ಣ ನಿಗಾವಹಿಸುವುದು, ಜಿಲ್ಲಾಡಳಿತದೊಂದಿಗೆ ಸಮನ್ವಯದಿಂದಕಾರ್ಯನಿರ್ವಹಿಸಬೇಕು ಮತ್ತು ಕಾಲ ಕಾಲಕ್ಕೆ ಮಾಹಿತಿ / ವರದಿಯನ್ನು ನೀಡುವುದು.

ದಿನನಿತ್ಯ ಖರೀದಿಸಿದ ಕೃಷಿ ಉತ್ಪನ್ನಗಳ ವಿವರ, ಮತ್ತುರೈತರಿಗೆ ಪಾವತಿಸಿದ ಹಣದ ವಿವರವನ್ನು ನಿಗಧಿತ ನಮೂನೆಯಲ್ಲಿ ಈ ಕಾರ್ಯಾಲಯಕ್ಕೆತಪ್ಪದೇ ಸಲ್ಲಿಸುವುದು, ಗುಣಮಟ್ಟ ಪರೀಕ್ಷಕರು ಕೃಷಿ ಉತ್ಪನ್ನ ಪರೀಕ್ಷಿಸಿ ಖರೀದಿಗೆಒಪ್ಪಿಗೆ ಸೂಚಿಸಿದ ನಂತರಖರೀದಿ ಏಜೆನ್ಸಿ ವ್ಯವಸ್ಥಾಪಕರು ಪ್ರತಿರೈತರಿಗೆ ಖರೀದಿ ಟೋಕನ್ ನೀಡಬೇಕು. ಖರೀದಿ ಟೋಕನ್‌ನಲ್ಲಿರೈತರ ಹೆಸರು, ಗ್ರಾಮ/ಬೆಳೆ ಪ್ರಮಾಣ, ಖರೀದಿ ದಿನಾಂಕಗಳನ್ನು ಸ್ಪಷ್ಟವಾಗಿ ನಮೂದಿಸಬೇಕು, ಉತ್ಪನ್ನ ಖರೀದಿಸಿದ ನಂತರಖರೀದಿ ಕೇಂದ್ರದ ವ್ಯವಸ್ಥಾಪಕರು ಪ್ರತಿರೈತರಿಗೆ ರಸೀದಿಯನ್ನು ಕಡ್ಡಾಯವಾಗಿ ನೀಡತಕ್ಕದ್ದು, (ಹಣ ಪಡೆಯಲು ಅನುಕೂಲವಾಗುವಂತೆ) ಖರೀದಿ ಕೇಂದ್ರದಲ್ಲಿರೈತರ ನೊಂದಣಿಗೆರೈತರ ಫ್ರೂಟ್ಸ್ ಐ.ಡಿ. ಮತ್ತುರಾಗಿ, ಭತ್ತ ಜೋಳ ಸಿರಿಧಾನ್ಯ ಬೆಳೆದಿರುವುದನ್ನು ಬೆಳೆ ಸಮೀಕ್ಷೆ ಮುಖೇನ ಖಾತರಿಪಡಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ರಾಗಿ ಮತ್ತು ಭತ್ತದ ಬೆಳೆಗಳು ತಡ ಮುಂಗಾರು ಹಂಗಾಮು ಬೆಳೆಗಳಾದ್ದರಿಂದ ಪೂರ್ವ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆಯಲ್ಲಿ ಸದರಿ ಬೆಳೆಗಳು ದಾಖಲಾಗಿರುವುದಿಲ್ಲ. ಸದರಿ 2 ಬೆಳೆಗಳು ಸಮೀಕ್ಷೆಯನ್ನು ಪ್ರಸ್ತುತಚಾಲ್ತಿಯಲ್ಲಿರುವತಡ ಮುಂಗಾರು ಬೆಳೆ ಸಮೀಕ್ಷೆಯಲ್ಲಿ ಕೈಗೊಳ್ಳಬೇಕಾಗಿದ್ದು, ತಡ ಮುಂಗಾರಿನಲ್ಲಿಜಿಲ್ಲೆಯ 15.11052 ಪ್ಲಾಟ್‌ಗಳ ಸಮೀಕ್ಷೆಯಗುರಿ ನೀಡಲಾಗಿದ್ದುಈವರೆಗೆ 11.05924 ಲಕ್ಷ ಪ್ಲಾಟ್‌ಗಳ ಸಮೀಕ್ಷೆ ಕೈಗೊಂಡು ಶೇ. 74ರಷ್ಟು ಪ್ರಗತಿಯಾಗಿರುತ್ತದೆ ಎಂದು ತಿಳಿಸಿದರು.

ಸೂಪರ್‌ವೈಸರ್‌ಗಳಿಂದ ಮೇಲ್ವಿಚಾರಣೆಯಾದ ನಂತರವೇ ಸಮೀಕ್ಷೆ ಪ್ರಕ್ರಿಯೇ ಪೂರ್ಣಗೊಳ್ಳುತ್ತದೆ. ಮೇಲ್ವಿಚಾರಣೆಯು ಶೇ.34ರಷ್ಟು ಪೂರ್ಣಗೊಂಡಿರುವುದನ್ನು ಜಿಲ್ಲಾಧಿಕಾರಿಗಳು ಪರಿಶೀಲಿಸಿ, ಕೃಷಿ ತೋಟಗಾರಿಕೆ, ರೇಷ್ಮೆ ಮತ್ತುಕಂದಾಯ ಇಲಾಖೆಯಎಲ್ಲಾ ಮೇಲ್ವಿಚಾರಕರು ಕಡ್ಡಾಯವಾಗಿ ಸಮೀಕ್ಷೆಯಾಗಿರುವ ಎಲ್ಲಾ ಪ್ಲಾಟ್‌ಗಳ ಮೇಲ್ವಿಚಾರಣೆಯನ್ನು ಪೂರ್ಣಗೊಳಿಸಲು ಸೂಚಿಸಿದರಲ್ಲದೆ, ಉಳಿದಿರುವ ಬೆಳೆ ಸಮೀಕ್ಷೆಯಎಲ್ಲಾ ಪ್ರಕ್ರಿಯೆಗಳನ್ನು ತ್ವರಿತವಾಗಿ ಶೇ. 100ರಷ್ಟು ಪ್ರಗತಿ ಸಾಧಿಸಲು ಖಾಸಗಿ ನಿವಾಸಿಗಳಿಗೆ ಸೂಕ್ತ ನಿರ್ದೇಶನ ನೀಡಿ, ಪೂರ್ಣಗೊಳಿಸಲು ವೈಯಕ್ತಿಕ ಗಮನ ಹರಿಸುವಂತೆ ಎಲ್ಲಾ ತಾಲ್ಲೂಕಿನ ತಹಸೀಲ್ದಾರ್‌ರು ಮತ್ತು ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕರಿಗೆ ಸೂಚಿಸಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248